**JANUARY 15,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಕೇಂದ್ರ ರೇಲ್ವೆ ಇಲಾಖೆಯಿಂದ** ಕಲ್ಯಾಣ ಕರ್ನಾಟಕ, ಕಿತ್ತೂರು ಕರ್ನಾಟಕ, ಮಧ್ಯ ಕರ್ನಾಟಕ ಭಾಗದ ರೈಲ್ವೆ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ಜಲ ಶಕ್ತಿ ಮತ್ತು ರೈಲ್ವೆ ಖಾತೆಯ ರಾಜ್ಯ ಸಚಿವರಾದ ವಿ.ಸೋಮಣ್ಣ ಹೇಳಿದರು. ಕೊಪ್ಪಳ ನಗರದ ಕು ್ಟಗಿಯಲ್ಲಿ ನೈಋತ್ಯ ರೈಲ್ವೆ ವತಿಯಿಂದ ನಿರ್ಮಾಣಗೊಂಡ, ರೇಲ್ವೆ ಮೇಲ್ಸೇತುವೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರಧಾನ ಮಂತ್ರಿಯವರ ಆಶಯದಂತೆ, ರೇಲ್ವೆ ಇಲಾಖೆಯ ಎಲ್ಲ ಕಾಮಗಾರಿಗಳು ತ್ವರಿತವಾಗಿ ಪೂರ್ಣಗೊಳ್ಳುತ್ತಿವೆ, ಅನೇಕ ಹೊಸ ಯೋಜನೆ ಹಾಗೂ ಕಾಮಗಾರಿಗಳು ಪೂರ್ಣಗೊಂಡು ಲೋಕಾರ್ಪಣೆಯಾಗುತ್ತಿವೆ ಎಂದರು. ಸಚಿವರು ಕಾರ್ಯಕ್ರಮಕ್ಕೂ ಮುನ್ನ ಶ್ರೀ ಗವಿಸಿದ್ದೇಶ್ವರ ಮಠಕ್ಕೆ ಭೇಟಿ ನೀಡಿದರು. ಕಾರ್ಯಕ್ರಮದ ನಂತರ ಕೊಪ್ಪಳ ರೈಲು ನಿಲ್ದಾಣದಲ್ಲಿ ನಡೆಯುತ್ತಿರುವ ಅಮೃತ ಭಾರತ್ ಸ್ಟೇಶನ್ ಕಾಮಗಾರಿ ಪರಿಶೀಲನೆ ನಡೆಸಿದರು.

<><><>

**ಬಾಗಲಕೋಟೆ ಜಿಲ್ಲೆಯ,** ಖಜ್ಜಿಡೋಣಿ ರೇಲ್ವೆ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಜನರ ಬೇಡಿಕೆಯಂತೆ ಬಾಗಲಕೋಟೆ–ಲೋಕಾಪುರ ರೈಲು ಮಾರ್ಗದಲ್ಲಿ, ಬೆಳಗ್ಗೆ ಹಾಗೂ ಸಂಜೆ ಪ್ಯಾಸೆಂಜರ್ ರೈಲು ಸಂಚಾರಕ್ಕೆ ಒತ್ತು ನೀಡಲಾಗಿದೆ ಎಂದರು.

<><><>

**ಯಾದಗಿರಿ ಜಿಲ್ಲೆ** ಸುರಪುರ ತಾಲೂಕು, ರಂಗಂಪೇಟೆಯ ರಾಕೇಶ್ ಗೋಪಾಲ ಚಿನ್ನಾಕಾರ, ಕೇಂದ್ರ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಅಡಿಯಲ್ಲಿ

ಕಾರ್ಯನಿರ್ವಹಿಸುತ್ತಿರುವ 'ದಿ ಕಂಟ್ರೋಲರ್ ಜನರಲ್ ಫಾರ್ ಪೇಟೆಂಟ್ಸ್, ಡಿಸೈನ್ಸ್, ಮತ್ತು ಟ್ರೇಡ್ ಮಾರ್ಕ್' ಕಚೇರಿಯಲ್ಲಿ ಪೇಟೆಂಟ್ ಅಧಿಕಾರಿಯಾಗಿ ನೇಮಕಗೊಂಡಿದ್ದಾರೆ. ಇದು ಗೆಜೆಟೆಡ್ ಶ್ರೇಣಿ ಹುದ್ದೆಯಾಗಿದೆ. ನಾಗಪುರದಲ್ಲಿ ನಾಲ್ಕು ತಿಂಗಳ ತರಬೇತಿ ಪಡೆಯಲಿರುವ, ರಾಕೇಶ್ ಚಿನ್ನಾಕಾರ ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಹುಬ್ಬಳ್ಳಿ ವರೂರು ನವಗ್ರಹ ತೀರ್ಥಕ್ಷೇತ್ರದಲ್ಲಿ,** ಭಗವಾನ್ ಶ್ರೀ ಪಾರ್ಶ್ವನಾಥರ ಮಹಾಮಸ್ತಕಾಭಿಷೇಕ ಹಾಗೂ 405 ಅಡಿ ಎತ್ತರದ ಸುಮೇರು ಪರ್ವತ ಜಿನಬಿಂಬ ಪ್ರತಿಷ್ಠಾ, ಪಂಚಕಲ್ಯಾಣ ಮಹಾಮಹೋತ್ಸವ ಇಂದಿನಿಂದ 26 ರವರೆಗೆ ನಡೆಯಲಿದೆ. ಇಂದು ಮಧ್ಯಾಹ್ನ 3 ಗಂಟೆಗೆ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರು ಪಂಚಕಲ್ಯಾಣ ಮಹಾಮಹೋತ್ಸವ ಹಾಗೂ ಮಹಾಮಸ್ತಕಾಭಿಷೇಕಕ್ಕೆ ಚಾಲನೆ ನೀಡಲಿದ್ದಾರೆ.

<><><>

**ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ–** ಕೆಯುಡಬ್ಲ್ಯೂಜೆ, ವಾರ್ಷಿಕ ಪ್ರಶಸ್ತಿಗಳನ್ನು ಪ್ರಕಟಿಸಿದೆ. ತುಮಕೂರಿನಲ್ಲಿ, ಬರುವ 18 ಮತ್ತು 19 ರಂದು ನಡೆಯಲಿರುವ, 39ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹಾಗೂ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಅವರು ತಿಳಿಸಿದ್ದಾರೆ.

<><><>

**ನಾಡೋಜಾ ಪಾಟೀಲ ಪುಟ್ಟಪ್ಪ ಅವರ ಪ್ರಪಂಚ** ಪತ್ರಿಕೆಯಲ್ಲಿ ಮುದ್ರಣವಾಗುತ್ತಿದ್ದ ಅನುಭವದಲ್ಲಿ ಅಮೃತತ್ವವಿತ್ತು, ಅದು ಅಂಕಣ ಓದುಗರಿಗೆ ಬದುಕಿನ ಪಾಠ ಕಲಿಸಿದೆ ಎಂದು ಸಾಹಿತಿ ಮಾಲತಿ ಪಟ್ಟಣಶೆಟ್ಟಿ ಹೇಳಿದರು. ಹಿರಿಯ ಸಾಹಿತಿ ನಾಡೋಜಾ ಡಾಕ್ಟರ್ ಪಾಟೀಲ ಪುಟ್ಟಪ್ಪ ಅವರ 105 ನೇ ಜನ್ಮದಿನಾಚರಣೆ ಅಂಗವಾಗಿ, ಧಾರವಾಡ ವಿದ್ಯಾವರ್ಧಕ ಸಂಘದ ರಾ.ಹ ದೇಶಪಾಂಡೆ ಸಭಾಭವನದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

<><><>

**ಕೇಂದ್ರ ಸರ್ಕಾರವು ನಿಗದಿಪಡಿಸಿದ** ಬೆಂಬಲ ಬೆಲೆಯಂತೆ, ತೊಗರಿ ಬೆಳೆ ಖರೀದಿ ಪ್ರಕ್ರಿಯೆಯು ಬಳ್ಳಾರಿಯಲ್ಲಿ ಆರಂಭಗೊಂಡಿದೆ. ಪ್ರತಿ ಕ್ವಿಂಟಲ್‌ಗೆ 7 ಸಾವಿರದ 550 ರೂಪಾಯಿಯಂತೆ, ರೈತರಿಂದ ಪ್ರತಿ ಎಕರೆಗೆ 4 ಕ್ವಿಂಟಾಲ್‌ನಿಂದ ಗರಿ ್ಠ 40 ಕ್ವಿಂಟಾಲ್ ನವರೆಗೆ ತೊಗರಿ ಖರೀದಿಸಲಾಗುತ್ತಿದೆ. ಸಂಜೆ 05 ಗಂಟೆಯವರೆಗೆ, ರಾಜ್ಯ ಸಹಕಾರ ಮಾರಾಟ ಮಹಾಮಂಡಳಿಯಿಂದ, ಬಳ್ಳಾರಿಯ ರೈತರ

ಸೇವಾ ಸಹಕಾರ ಸಂಘದಲ್ಲಿ ಉತ್ಪನ್ನ ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ತಿಳಿಸಿದ್ದಾರೆ.

<><><>

**ಧಾರವಾಡದ ಕೃಷಿ** ವಿಶ್ವವಿದ್ಯಾಲಯದ ಅಮೃತ ಮಹೋತ್ಸವದ ಉದ್ಘಾಟನೆಯನ್ನು ಉಪರಾಷ್ಟ್ರಪತಿ ಜಗದೀಪ ಧನಕರ್ ನಾಳೆ ಬೆಳಗ್ಗೆ 11 ಘಂಟೆಗೆ ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ನೆರವೇರಿಸಲಿದ್ದಾರೆ. ರಾಜ್ಯಪಾಲ ಥಾವರಚಂದ ಗೆಹಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ, ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್. ಲಾಡ್ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ.

<><><>

**ಕೈಗಾರಿಕಾ ತರಬೇತಿ ಉದ್ಯೋಗ** ಇಲಾಖೆ ವತಿಯಿಂದ ಯುವನಿಧಿ ಯೋಜನೆಯಡಿ ನೋಂದಣಿ ಆಗುವ ಪದವೀಧರರಿಗೆ ಮತ್ತು ಡಿಪ್ಲೊಮಾ ತೇರ್ಗಡೆಯಾದವರಿಗೆ ನಿರುದ್ಯೋಗ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗುತ್ತಿದೆ, ಹೆಸರು ನೋಂದಾಯಿಸಲು 'ಯುವನಿಧಿ ವಿಶೇಷ ನೋಂದಣಿ ಅಭಿಯಾನವು' 20 ನೇ ತಾರೀಖಿನ ವರೆಗೆ ನಡೆಯಲಿದೆ.

<><><>

**ಕಲ್ಯಾಣ ಕರ್ನಾಟಕ ವಿಭಾಗದ** ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆಯ ದ್ವಿತೀಯ ಜಾಂಬೋರೇಟ್ ಯಾದಗಿರಿ ನಗರದಲ್ಲಿ 17 ರಿಂದ 21 ರ ತನಕ ಜರುಗಲಿದೆ. ಜಾಮಬೋರೇಟ್ ಯಶಸ್ವಿಗೊಳಿಸಲು ಸಿದ್ಧತೆ ಕಾರ್ಯಗಳು ಭರದಿಂದ ಸಾಗಿವೆ ಎಂದು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ನ ಯಾದಗಿರಿ ಜಿಲ್ಲಾ ಸಂಸ್ಥೆ ಅಧ್ಯಕ್ಷ ಸುರೇಶ್ ಸಜ್ಜನ್ ತಿಳಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>